ಆ) ಇದ್ದಲ್ಲಿ, ಇದನ್ನು ನೀಗಿಸಲು 2ನೇ ಹಂತದ ಕುಡಿಯುವ ನೀರಿನ ಯೋಜನೆ ಯಾವ ಹಂತದಲ್ಲಿದೆ?

ಇ) ಶೀಘ್ರ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು) :

ಅ) ಹೌದು, ಬೇಸಿಗೆಯ ನಾಲ್ಕು ತಿಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುತ್ತದೆ.

ಆ) 2ನೇ ಹಂತದ ಕುಡಿಯುವ ನೀರಿನ ಯೋಜನೆಯ ಅಂದಾಜು ವೆಚ್ಚ ರೂ.42.50 ಕೋಟಿ ಇದ್ದು. ಪ್ರಾಥಮಿಕ ಪ್ರಸ್ತಾವನೆಯ ಯೋಜನಾ ವರದಿಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ತಯಾರಿಸಲಾಗಿದೆ.

ಇ) ಪುರಸಭೆ ಕೋರಿಕೆಯಂತೆ ಬಂಟ್ವಾಳ ಪಟ್ಟಣಕ್ಕೆ ಹಾಲಿ ಇರುವ ವಿತರಣಾ ವ್ಯವಸ್ಥೆಯನ್ನು ಅಭಿವೃದ್ಧಿ ಪಡಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಯೋಜನೆಯನ್ನು ತಯಾರಿಸಿ ಪ್ರಸ್ತಾವಿಸಲಾಗಿರುತ್ತದೆ. ಪುರಸಭೆಯ ಅನುಮೋದನೆ ನಂತರ ಸರ್ವೆ ಕಾರ್ಯ, ಡಿಪಿಆರ್ ಸಿದ್ದಪಡಿಸುವಿಕೆ, ಕನ್ಸಲ್‌ಟೆಂಟ್‌ಗಳ ನೇಮಕಾತಿ ಇತ್ಯಾದಿಗೆ ಉಪಕ್ರಮಿಸಲಾಗುವುದು.

355 ಶ್ರೀ ಮಲ್ಲಿಕಾ ಪ್ರಸಾದ್ (ಪುತ್ತೂರು) : ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಪ ವಿಭಾಗ ಕೇಂದ್ರವಾಗಿ ಪುತ್ತೂರಿನಲ್ಲಿ ಮಿನಿ ವಿಮಾನ ನಿಲ್ದಾಣ ನಿರ್ಮಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಮಿನಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಎಂದಿನಿಂದ ನಿರ್ಮಿಸಲಾಗುವುದು?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು) :

ಅ) ಪುತ್ತೂರಿನಲ್ಲಿ ಮಿನಿ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ಉದ್ದೇಶಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪ್ರವಾಸೋದ್ಯಮ ಯೋಜನೆಗಳ ಅನುಷ್ಠಾನ

816 ಶ್ರೀ ಹ್ಯಾರೀಸ್.ಎನ್.ಎ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ ನೀಡುವುದು;

ಆ) ಸಮುದ್ರ ತೀರಗಳಲ್ಲಿ ಹಾಗೂ ದ್ವೀಪ ಪ್ರದೇಶಗಳಲ್ಲಿ ಪ್ರವಾಸೋದ್ಯಮ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸಾಕಷ್ಟು ನೈಸರ್ಗಿಕ ಹಾಗೂ ಸೂಕ್ತ ಅವಕಾಶಗಳಿದ್ದರೂ ಸರ್ಕಾರ ಗಮನಹರಿಸದಿರಲು ಕಾರಣಗಳೇನು;

ಇ) ಪ್ರವಾಸೋದ್ಯಮದ ಮೂಲಕ ನಾಗರೀಕರಿಗೆ ಹಾಗೂ ರಾಜ್ಯಕ್ಕೆ ಬಹಳಷ್ಟು ಪ್ರಯೋಜನಗಳು ಒದಗಿಬಂದಿರುವುದರಿಂದ ಇಲಾಖೆಯು ಕಾರ್ಯಚಟುವಟಿಕೆಗಳಿಗೆ ಹೆಚ್ಚಿನ ತೀವ್ರತೆಯನ್ನು ನೀಡಲು ಕ್ರಮಕೈಗೊಳ್ಳುವುದೇ;

ಈ) ರಾಜ್ಯ ಪ್ರವಾಸೋದ್ಯಮ ಇಲಾಖೆಗೆ ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದ ಅನುದಾನ ಮತ್ತು ಅದರ ವಿನಿಯೋಗದ ಕುರಿತಾದ ವಿವರಗಳೇನು?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಕರಾವಳಿ ಜಿಲ್ಲೆಗಳಾದ ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗೋಕರ್ಣ, ಕಾಸರಕೋಡ್, ತ್ರಾಸಿ, ಉಲ್ಲಾಳ, ಸೇಂಟ್‌ಮೇರಿ ದ್ವೀಪ, ಮಲ್ಪೆ, ತಣ್ಣೀರುಬಾವಿ ಹಾಗೂ